158ನೇ ಮು ಉ SL NO:- 37 ದಿ:- 12.03.2026

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ಇವರ ಶೂನ್ಯ ವೇಳೆ ಪ್ರಸ್ತಾವಕ್ಕೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉತ್ತರ.**

**ಪ್ರಶ್ನೆ:** ಕರ್ನಾಟಕ ರಾಜ್ಯವು ಯುವ ಜನಾಂಗದ ಸಂಖ್ಯೆ ಹೆಚ್ಚಿರುವ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯದ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಅತ್ಯಂತ ಪ್ರಮುಖವಾಗಿದೆ. ಆದರೆ ಯುವಕರ ಸಮಸ್ಯೆಗಳು, ಉದ್ಯೋಗ, ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆರೋಗ್ಯ ಹಾಗೂ ಸಾಮಾಜಿಕ ಭದ್ರತೆ ಕುರಿತಾಗಿ ಸಮಗ್ರವಾಗಿ ಗಮನ ಹರಿಸುವ ವಿಶೇಷ ಸಂಸ್ಥೆಯಾಗಿ ರಾಜ್ಯ ಯುವ ಆಯೋಗದ ಅವಶ್ಯಕತೆಯಿದ್ದು, ಕರ್ನಾಟಕದಲ್ಲಿ ಇಲ್ಲಿಯವರೆಗೆ ಆಯೋಗವನ್ನು ರಚಿಸಿರುವುದಿಲ್ಲ. ಯುವಕರ ಹಿತಾಸಕ್ತಿಗಳನ್ನು ರಕ್ಷಿಸಲು, ಯುವಕರ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸಲು ಕರ್ನಾಟಕ ರಾಜ್ಯ ಯುವ ಆಯೋಗವನ್ನು ಸ್ಥಾಪಿಸುವುದು ಅತ್ಯಗತ್ಯವಾಗಿದೆ.

ಕರ್ನಾಟಕದಲ್ಲಿ ಸುಮಾರು 15 ರಿಂದ 29 ವರ್ಷದೊಳಗಿನ ಯುವಕರ ಸಂಖ್ಯೆ ಸುಮಾರು 2.1 ಕೋಟಿ ಇರುತ್ತದೆ. ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿ ಸುಮಾರು ಶೇಕಡಾ 29 ರಷ್ಟು ಯುವಕರು ಇರುತ್ತಾರೆ. ಕರ್ನಾಟಕದಲ್ಲಿ ಯುವಕರು ನಿರುದ್ಯೋಗ ಸಮಸ್ಯೆ, ಶಿಕ್ಷಣ ಮತ್ತು ಉದ್ಯಮಗಳಲ್ಲಿ ಕೌಶಲ್ಯದ ಅಗತ್ಯತೆ, ತಂತ್ರಜ್ಞಾನ ಮತ್ತು ಉದ್ಯಮ ಕ್ಷೇತ್ರಗಳಲ್ಲಿ ಹೊಸ ಕೌಶಲ್ಯಗಳ ಅಗತ್ಯತೆ, ಗ್ರಾಮೀಣ ಪ್ರದೇಶದಲ್ಲಿ ತರಬೇತಿ ಮತ್ತು ಮಾರ್ಗದರ್ಶನದ ಅವಶ್ಯಕತೆ ಇತ್ಯಾದಿಗಳನ್ನು ಹೊಂದಿರುತ್ತಾರೆ. ಇದರೊಂದಿಗೆ ಸಾಮಾಜಿಕ ಮತ್ತು ಆರೋಗ್ಯ ಸಮಸ್ಯೆಗಳು, ಮಾನಸಿಕ ಆರೋಗ್ಯ ಸಮಸ್ಯೆಗಳು, ಮಾದಕ ವಸ್ತುಗಳ ಬಳಕೆಯ ಸಮಸ್ಯೆ ಅನುಭವಿಸುತ್ತಿದ್ದಾರೆ. ಆದ್ದರಿಂದ ಯುವಕರ ಸಮಸ್ಯೆಗಳನ್ನು ಸಮಗ್ರವಾಗಿ ಪರಿಹರಿಸಲು ಮತ್ತು ಅವರ ಸಾಮರ್ಥ್ಯವನ್ನು ರಾಷ್ಟ್ರ ನಿರ್ಮಾಣದಲ್ಲಿ ಬಳಸಲು ಕರ್ನಾಟಕ ರಾಜ್ಯ ಯುವ ಆಯೋಗವನ್ನು ಸ್ಥಾಪಿಸುವುದು ಅವಶ್ಯಕವಾಗಿದೆ

ಯುವಕರಲ್ಲಿ ಆರೋಗ್ಯ ಜಾಗೃತಿ ಮತ್ತು ಜೀವನ ಕೌಶಲ್ಯಗಳ ಕೊರತೆ ಇದೆ. ರಾಜ್ಯದ ಯುವಕರು ಉದ್ಯೋಗದಿಂದ ಹಿಡಿದು ಹಲವಾರು ಸಮಸ್ಯೆಗಳನ್ನು ಸಮಾಜದ ಹಲವಾರು ಸ್ತರಗಳಲ್ಲಿ ಅನುಭವಿಸುತ್ತಿದ್ದು, ಇವುಗಳನ್ನು ಸಮಗ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ಕರ್ನಾಟಕದಲ್ಲಿ ರಾಜ್ಯ ಯುವ ಆಯೋಗದ ಅವಶ್ಯಕತೆಯಿದ್ದು, ಅನೇಕ ಮಾಧ್ಯಮಗಳು ಲೇಖನ ಮತ್ತು ವರದಿಗಳ ಮೂಲಕ ಆಯೋಗದ ಅವಶ್ಯಕತೆಯನ್ನು ಪ್ರತಿಪಾದಿಸಿರುತ್ತವೆ. ಆದುದರಿಂದ ಕರ್ನಾಟಕ ರಾಜ್ಯದ ಯುವ ಜನಾಂಗದ ಆಶೋತ್ತರಗಳಿಗೆ ಅನುಗುಣವಾಗಿ ಮತ್ತು ಮಾಧ್ಯಮಗಳ ವರದಿಗೆ ಪೂರಕವಾಗಿ ರಾಜ್ಯ ಯುವ ಆಯೋಗವನ್ನು ಸ್ಥಾಪಿಸಲು ಶೂನ್ಯವೇಳೆಯಲ್ಲಿ ಸದನದಲ್ಲಿ ಪ್ರಸ್ತಾಪಿಸುವ ಮೂಲಕ ರಾಜ್ಯ ಸರ್ಕಾರವು ಕ್ರಮ ಕೈಗೊಳ್ಳಲು ಕೋರುತ್ತೇನೆ.

**ಉತ್ತರ:**

ರಾಜ್ಯ ಸರ್ಕಾರವು ಯುವಕರ ಸರ್ವತೋಮುಖ ಬೆಳವಣಿಗೆಗಾಗಿ ವಿವಿಧ ಕ್ರಮಗಳನ್ನು ಕೈಗೊಳ್ಳುತ್ತಿದೆ. ಆರೋಗ್ಯ ಇಲಾಖೆಯ ವತಿಯಿಂದ ಯುವಕ ಯುವತಿಯರ ಆರೋಗ್ಯ ಸಮಸ್ಯೆಗಳು, ಮಾನಸಿಕ ಆರೋಗ್ಯ ಸಮಸ್ಯೆಗಳು, ಮಾದಕ ವಸ್ತುಗಳ ಬಳಕೆಯ ಸಮಸ್ಯೆ ಹಾಗು ಇತರೆ ಸಮಸ್ಯೆಗಳ ಕುರಿತು ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಕೌಶಲ್ಯ ಅಭಿವೃದ್ಧಿ ಇಲಾಖೆಯು ಯುವ ಜನತೆಗೆ ಉದ್ಯೋಗ ಮತ್ತು ಉದ್ಯಮಶೀಲತೆಗಾಗಿ ಜಾಗತಿಕ ಗುಣಮಟ್ಟದ ತರಬೇತಿ ನೀಡುವ ಮೂಲಕ ಕೌಶಲ್ಯ ಅಭಿವೃದ್ಧಿ ಒದಗಿಸುತ್ತಿದೆ.

ಮಾಹಿತಿ ತಂತ್ರಜ್ಞಾನ ಇಲಾಖೆಯು ಯುವಕರಿಗೆ ತಂತ್ರಜ್ಞಾನ ತರಬೇತಿ ನೀಡುವ ಮೂಲಕ ಪ್ರಾರಂಭಿಕ ಹಂತದಲ್ಲಿ ಸ್ವಾವಲಂಬಿಗಳಾಗಲು ಸಹಕಾರಿಯಾಗಿದೆ ಮತ್ತು startup culture ಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಡಿಜಿಟಲ್ ಸಾಕ್ಷರತೆ, ವೃತ್ತಿ ಮಾರ್ಗದರ್ಶನ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಅದೇ ರೀತಿಯಾಗಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಯುವಕರಿಗೆ ಸಂಬಂಧಪಟ್ಟ ವಿವಿಧ ಕಾರ್ಯಕ್ರಮಗಳನ್ನು ಉತ್ತಮ ರೀತಿಯಲ್ಲಿ ಆಯೋಜಿಸಲಾಗುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಂಗ ಸಂಸ್ಥೆಗಳಾದ "ಕರ್ನಾಟಕ ಕ್ರೀಡಾ ಪ್ರಾಧಿಕಾರ", "ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ" ಹಾಗೂ "ಎನ್.ಎಸ್.ಎಸ್ ಕೋಶಗಳು" ರಾಜ್ಯದ ಯುವ ಜನಾಂಗದ ಅಭಿವೃದ್ಧಿಯ ಆಶೋತ್ತರಗಳಿಗೆ ಪೂರಕವಾದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಕೈಗೊಳ್ಳುತ್ತಿವೆ.

ಪ್ರಸ್ತುತ ರಾಜ್ಯದಲ್ಲಿ ಯುವ ಆಯೋಗವನ್ನು ರಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

**ವೈಎಸ್‌ಡಿ-ಸಿಡಿಎನ್/160/2026**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ